ಶ್ರೀ ನಿಂಗಪ್ಪ. ಹೆಚ್. (ಕುಣಿಗಲ್)117(223)

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಕುಣಿಗಲ್ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗ್ರಾಮೀಣ ರಸ್ತೆಗಳು ತೀವ್ರ ಹದೆಗೆಟ್ಟಿದ್ದು ಸಂಚಾರ ಯೋಗ್ಯವಾಗಿದ್ದಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ)ಬಂದಿದ್ದಲ್ಲಿ ಅಂತಹ ರಸ್ತೆಗಳನ್ನು ಅಭಿವೃದ್ಧಿ ಪಡಿಸಿ ಡಾಂಬರೀ ಕರಣ ಮಾಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ)ಯಾವ ಅವಧಿಯಲ್ಲಿ ಈ ರಸ್ತೆಗಳನ್ನು ಅಭಿವೃದ್ಧಿ ಪಡಿಸ ಲಾಗುವುದು?

ಶ್ರೀ ಸಿ.ಎಂ.ಉದಾಸಿ

ಅ) ಕುಣಿಗಲ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಗ್ರಾಮೀಣ ರಸ್ತೆಗಳನ್ನು ದುರಸ್ತಿ/ ಅಭಿವೃದ್ಧಿ ಪಡಿಸುವ ಅಗತ್ಯತೆ ಕಂಡುಬಂದಿರುತ್ತದೆ.

ಆ) 2007–08ನೇ ಸಾಲಿನಲ್ಲಿ ಮುಖ್ಯ ಮಂತ್ರಿ ಗ್ರಾಮೀಣ ರಸ್ತೆ ಅಭಿವೃದ್ಧಿ ಯೋಜನೆ (ಲೆಕ್ಕ ಶೀರ್ಷಿಕೆ–3054) ಮತ್ತು 12ನೇ ಹಣಕಾಸು ಆಯೋಗದ ಶಿಫಾರಸ್ಸಿನ ಅನುದಾನದಡಿ ಜಿಲ್ಲಾ ಪಂಚಾಯತಿಗೆ ಒದಗಿಸಲಾದ ಅನುದಾನದಲ್ಲಿ ಡಾಂಬರೀಕರಣಗೊಂಡ ರಸ್ತೆ ಮತ್ತು ಜಲ್ಲಿ ರಸ್ತೆಗಳನ್ನು ನಿರ್ವಹಣೆ ಮಾಡಲು ಯೋಜಿಸಲಾಗಿದೆ.